ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕನ್ನಡ & ಸಂಸ್ಕೃತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 5/12/19

# ತೂಗುಮಂಚದ ಕವಿಗೆ ಸಮ್ಮೇಳನಾಧ್ಯಕ್ಷತೆ ಪಟ್ಟ

## 85ನೇ ನುಡಿ ಹಬ್ಬದ ಸಾರಥಿಯಾಗಿ ಡಾ. ಎಚ್ಚೆಸ್ವಿ

**ಬೆಂಗಳೂರು:** ಕಾವ್ಯ ಲೋಕದಲ್ಲಿ ತಮ್ಮದೇ ಆದ ಹೊಸ ಪಥವನ್ನು ಸೃಷ್ಟಿಸಿದ 'ತೂಗು ಮಂಚದ ಕವಿ', ಹಿರಿಯ ಸಾಹಿತಿ ಡಾ. ಎಚ್.ಎಸ್. ವೆಂಕಟೇಶಮೂರ್ತಿ ಅವರು 85ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.



ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಮನು ಬಳಿಗಾರ್ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕವಿತೆ, ಕವನ, ಕಾದಂಬರಿ, ನಾಟಕ, ಮಕ್ಕಳ ಸಾಹಿತ್ಯ ಸೇರಿದಂತೆ ಸಾಹಿತ್ಯದ ಎಲ್ಲಾ ಕ್ಷೇತ್ರಗಳಲ್ಲೂ ಸೇವೆ ಸಲ್ಲಿಸಿದ ಎಚ್‌ಎಸ್‌ವಿ ಹೆಸರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಎಂದರು.

**ಫೆ.5ರಿಂದ 7ರವರೆಗೆ**

ಸಮ್ಮೇಳನ ಅಧ್ಯಕ್ಷರ ಸ್ಥಾನಕ್ಕೆ ಪ್ರತಿ ವರ್ಷವೂ ಅರ್ಹರಾದವರು ಸಾಕಷ್ಟು ಸಂಖ್ಯೆಯಲ್ಲಿರುತ್ತಾರೆ. ಅವರಲ್ಲಿ ಒಬ್ಬರಿಗೆ ಮಾತ್ರ ಅವಕಾಶ ಸಿಗುತ್ತದೆ. ಆ ಅವಕಾಶ ಮತ್ತು ಯೋಗಾಯೋಗ ಈ ಬಾರಿ ನನಗೆ ಸಿಕ್ಕಿದೆ. ಇದು ಕನ್ನಡ ಭಾಷೆ ಮತ್ತು ಕನ್ನಡಿಗರ ಆಶೀರ್ವಾದ ಎಂದು ಭಾವಿಸಿದ್ದೇನೆ. ಈ ಸ್ಥಾನವನ್ನು ಅತ್ಯಂತ ಪ್ರೀತಿ, ಗೌರವ, ಸಂತೋಷ ಮತ್ತು ವಿನಯದಿಂದ ಸ್ವೀಕರಿಸುತ್ತಿದ್ದೇನೆ.

**-ಡಾ. ಎಚ್.ಎಸ್. ವೆಂಕಟೇಶಮೂರ್ತಿ**

# ತೂಗುಮಂಚದ ಕವಿ ಸಮ್ಮೇಳನಾಧ್ಯಕ್ಷ

» ಮೊದಲ ಪುಟದಿಂದ

85ನೇ ಕನ್ನಡ ಸಾಹಿತ್ಯ ಸಮ್ಮೇಳನ ಕಲ್ಯಾಣ ಕರ್ನಾಟಕದ ಕಲಬುರಗಿಯಲ್ಲಿ 2020ರ ಫೆ. 5ರಿಂದ 7ರವರೆಗೆ ನಡೆಯಲಿದ್ದು, ಸಿದ್ಧತೆಗಳು ಆರಂಭವಾಗಿವೆ ಎಂದು ಮನು ಬಳಿಗಾರ್ ತಿಳಿಸಿದರು.

**12 ಕೋಟಿ ರೂ. ಖರ್ಚು:** ''ಸಮ್ಮೇಳನಕ್ಕೆ 10ರಿಂದ 12 ಕೋಟಿ ರೂ. ಖರ್ಚಾಗಬಹುದೆಂದು ಅಂದಾಜಿಸಲಾಗಿದೆ. ಸರಕಾರ ಈಗಾಗಲೇ ಎರಡು ಕಂತುಗಳಲ್ಲಿ ಒಂದಷ್ಟು ಹಣ ನೀಡಿದೆ. ಉಳಿದ ಅನುದಾನಕ್ಕೆ ಯಾವುದೇ ಆತಂಕವಿಲ್ಲ'' ಎಂದು ಮನು ಬಳಿಗಾರ್ ತಿಳಿಸಿದರು.

**700 ಮಳಿಗೆಗಳು:** ''ಕಲಬುರಗಿ ವಿಶ್ವವಿದ್ಯಾಲಯದ ಆವರಣದಲ್ಲಿ ಸಾಹಿತ್ಯ ಸಮ್ಮೇಳನ ನಡೆಯಲಿದೆ. ಮೂರು ವೇದಿಕೆಗಳಲ್ಲಿ ಕಾರ್ಯಕ್ರಮ ನಿರ್ವಹಣೆಯಾಗಲಿದೆ. ವಿವಿ ಆವರಣದಲ್ಲಿ ಪ್ರಧಾನ ವೇದಿಕೆ ಹಾಗೂ ಅಂಬೇಡ್ಕರ್ ಭವನ ಮತ್ತು ಮಹಾತ್ಮ ಗಾಂಧಿ ಭವನದಲ್ಲಿ ಸಮಾನಾಂತರ ವೇದಿಕೆಗಳು ಇರಲಿವೆ. ಸಮ್ಮೇಳನದಲ್ಲಿ 500 ಪುಸ್ತಕ ಮಳಿಗೆಗಳು ಹಾಗೂ 200 ವಾಣಿಜ್ಯ ಮಳಿಗೆಗಳೂ ಸೇರಿದಂತೆ ಒಟ್ಟು 700 ಮಳಿಗೆಗಳನ್ನು ತೆರೆಯಲಾಗುವುದು,'' ಎಂದು ಮನು ಬಳಿಗಾರ್ ತಿಳಿಸಿದರು.

**1.50 ಲಕ್ಷ ಮಂದಿ ಆಗಮನ:** ಸಮ್ಮೇಳನಕ್ಕೆ ರಾಜ್ಯದ ನಾನಾ ಭಾಗಗಳಿಂದ ಸುಮಾರು 1.50 ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸುವ ನಿರೀಕ್ಷೆ ಇದೆ.

**ಗೋಷ್ಠಿಗಳಿಗಾಗಿ ಸದಸ್ಯರ ನೇಮಕ**

ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ಸ್ವರೂಪ ಹಾಗೂ ವಿಷಯಗಳ ಆಯ್ಕೆಗೆ ಸಮಿತಿ ರಚಿಸಲಾಗಿದೆ. ಸಾಹಿತಿಗಳಾದ ಡಾ. ವಸಂತ ಕುಷ್ಟಗಿ, ಎಸ್.ಆರ್. ವಿಜಯಶಂಕರ್, ಡಾ. ಎಚ್.ಎಲ್. ಪುಷ್ಪಾ, ಸುಬ್ಬು ಹೊಲೆಯಾರ್, ಡಾ. ರಂಗರಾಜ ವನದುರ್ಗ ಹಾಗೂ ವಿಶ್ರಾಂತ ಕುಲಪತಿ ಡಾ. ಚಿನ್ನಪ್ಪಗೌಡ ಅವರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ, ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರಿಗೆ ಪೂರ್ವಭಾವಿ ಸಿದ್ಧತೆಗಳ ಬಗ್ಗೆ ಮನವರಿಕೆ ಮಾಡಲಾಗಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಎಸ್. ರಂಗಪ್ಪ, ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಡಾ. ವಸುಂಧರಾ ಭೂಪತಿ, ಸಾಹಿತಿ ಬಿ.ಟಿ. ಲಲಿತಾ ನಾಯಕ್, ಕಸಾಪದ ಗೌರವ ಕಾರ್ಯದರ್ಶಿ ವ.ಚ. ಚನ್ನೇಗೌಡ, ಗೌರವ ಕೋಶಾಧ್ಯಕ್ಷ ಪಿ. ಮಲ್ಲಿಕಾರ್ಜುನಪ್ಪ, ಆಂಧ್ರ, ತಮಿಳುನಾಡು, ಮಹಾರಾಷ್ಟ್ರ, ಗೋವಾ, ಕೇರಳ, ಬೆಂಗಳೂರು ನಗರ ಜಿಲ್ಲಾ ಕಸಾಪ ಮತ್ತಿತರ ಘಟಕಗಳ ಅಧ್ಯಕ್ಷರು ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗವಹಿಸಿದ್ದರು.